# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **534 (599)** |
| **ಸದಸ್ಯರ ಹೆಸರು** | | **ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | | **14-12-2020** |
| **ಉತ್ತರಿಸಬೇಕಾದ ಸಚಿವರು** | | **ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)** |
| **ಪ್ರಶ್ನೆ** | | **ಉತ್ತರ** |
| ಅ) | ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯು ಕೋವಿಡ್-19ರ ಪರಿಣಾಮ, ತಡೆಹಿಡಿಯಲಾಗಿರುವ ಆಯ್ಕೆ ಪಟ್ಟಿಯನ್ನು ತೆರವುಗೊಳಿಸಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವುದು ಯಾವಾಗ? | ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020 ದಿನಾಂಕ:10.06.2020 & ಆಇ/3/ ಬಿಇಎಂ/2020 ದಿ:06.07.2020 ರನ್ವಯ ಸರ್ಕಾರದ ಪತ್ರ ಸಂಖ್ಯೆ:ಇಡಿ/105/ಯುಪಿಸಿ/2020, ದಿ;29.07.2020 ಮತ್ತು ಇಡಿ/98/ಯುಪಿಸಿ/2020, ದಿನಾಂಕ:13.08.2020 ರಲ್ಲಿ ಕೋವಿಡ್-19ರ ಹಿನ್ನಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವುದರಿಂದ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲ, ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲ, ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ಈಗಾಗಲೇ ಆರ್ಥಿಕ ಇಲಾಖೆಯ ಸಹಮತಿ ಪಡೆದು ನೇಮಕಾತಿಯ ವಿವಿಧ ಹಂತಗಳಲ್ಲಿರುವ ಹುದ್ದೆಗಳಿಗೂ ಸಹ ಈ ಆದೇಶ ಅನ್ವಯವಾಗುತ್ತದೆ.<br><br>ಆರ್ಥಿಕ ಇಲಾಖೆಯ ಮಿತವ್ಯಯ ಆದೇಶವನ್ನು ತೆರವುಗೊಳಿಸಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಮಿತವ್ಯಯ ಆದೇಶ ತೆರವುಗೊಳಿದ ತಕ್ಷಣ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು. |

ಇಡಿ 164 ಯುಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)